**ಸಾಕ್ಷಿಯನ್ನು ದಿಃ 29.10.2025 ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ಎದುರುದಾರರ ಪರ ಶ್ರೀ ಎಂ.ಇ.ಕೆ ವಕೀಲರಿಂದಃ-**

ನನ್ನ ಗಂಡನಿಗೆ ಮುನೇರಾಬಾದ್ ನಿಂದ ಬೆಂಗಳೂರಿಗೆ ವರ್ಗಾವಣೆ ಆದಾಗ ನೀವು ಅವರ ಜೊತೆ ಹೋಗಿದ್ದಿರಾ ಎಂದರೆ ಸಾಕ್ಷಿ ಅಲ್ಲೆ ನಮಗೆ ಬಿಟ್ಟು ಹೋಗಿದ್ದರು ಎನ್ನುತ್ತಾರೆ. ಎದುರುದಾರರು ನನ್ನನ್ನು ಬೆಂಗಳೂರಿಗೆ ಕರೆದುಕೊಂಡು ಹೋಗಿದ್ದರೂ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ 02.02.2019 ರಂದು ಎದುರುದಾರರು ನನ್ನನ್ನು ಆತನ ಸ್ನೇಹಿತ ಗಂಗಾಧರ್ ಎಂಬುವವರ ಮನೆಗೆ ಕರೆದುಕೊಂಡು ಹೋಗಿದ್ದರು. ಸ್ನೇಹಿತನ ಮನೆಗೆ ಕರೆದುಕೊಂಡು ಎದುರುದಾರರು ತನ್ನ ಮನೆಗೆ ಕರೆದುಕೊಂಡು ಹೋಗಿದ್ದರು ಎಂದರೆ ಸರಿಯಲ್ಲ. ಬೆಂಗಳೂರಿನಲ್ಲಿ ನಾನು 3 ನೇ ತಾರೀಖಿನಿಂದ 6 ನೇ ತಾರೀಖಿನವರೆಗೂ ಇದ್ದೆ. ಎದುರುದಾರರು ಸರ್ಕಾರಿ ಕೆಲಸದಲ್ಲಿ ಇರುವುದರಿಂದ ಸಾಮಾನ್ಯವಾಗಿ 9 ಗಂಟೆಗೆ ಕೆಲಸಕ್ಕೆ ಹೋಗಿ 5 ಗಂಟೆಗೆ ವಾಪಸ್ಸು ಬರುತ್ತಿದ್ದರು ಎಂದರೆ ಸಾಕ್ಷಿ 9 ಗಂಟೆ ಹೋಗಿ 3 ಗಂಟೆಗೆ ಮನೆಗೆ ಬರುತ್ತಿದ್ದರು ಎಂದು ನುಡಿಯುತ್ತಾರೆ. ಅವರು ಪೊಲೀಸ್ ಕಾನ್ಸಟೇಬಲ್ ಆಗಿ ನೇಮಕಗೊಂಡಿದ್ದರು ಎಂದರೆ ಸರಿ. ಅವರು ಯಾವುದೇ ಶಿಕ್ಷಕ ವೃತ್ತಿ ಮಾಡುತ್ತಿರಲಿಲ್ಲ, ರಿಜರ್ವ ಪೊಲೀಸ್ ಆಗಿ ಕೆಲಸ ಮಾಡುತ್ತಿದ್ದರು ಎಂದರೆ ಟೀಚಿಂಗ್ ಕೆಲಸ ಮಾಡುತ್ತಿದ್ದರು ಎನ್ನುತ್ತಾರೆ. ಅವರು ಪೊಲೀಸ್ ಕಾನ್ಸಟೇಬಲ್ ಆದ ಕಾರಣ ಅವರಿಗೆ ಪ್ರತಿ ಭಾನುವಾರ ರಜೆ ಇರಲಿಲ್ಲ ಎಂದರೆ ಸರಿಯಲ್ಲ.

ಬೆಂಗಳೂರಿನಲ್ಲಿ ಎದುರುದಾರರು ಕೆಲಸಕ್ಕೆ ಹೋದಾಗ ಮನೆಯಲ್ಲಿ ಯಾರು ಇರುತ್ತಿದ್ದರು ಎಂದರೆ ಸಾಕ್ಷಿ ನಾನು ಬೆಂಗಳೂರಿನಲ್ಲಿ ಇರಲೇ ಇಲ್ಲ ಎನ್ನುತ್ತಾರೆ. ಬೆಂಗಳೂರಿನಲ್ಲಿ ಎದುರುದಾರರು ಕೆಲಸಕ್ಕೆ ಹೋದಾಗ ಮನೆಯಲ್ಲಿ ನಾನು ಒಬ್ಬಳೆ ಇರಬೇಕಾಗುತ್ತದೆ ಎಂದು ನಾನು ಊರಿಗೆ ಬಂದೆ ಎಂದರೆ ಸರಿಯಲ್ಲ. ಎದುರುದಾರರು ನನ್ನನ್ನು ಮತ್ತು ಮಗುವನ್ನು ಬೆಂಗಳೂರಿಗೆ ಕರೆದುಕೊಂಡು ಹೋಗಿರುವುದು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿದ್ದೇನೆ ಎಂದರೆ ಸರಿ. ಎದುರುದಾರರು ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿರುವಾಗ ನಾನು ಡ್ಯೂಟೀಫುಲ್ ವೈಫ್ ತರ ಎದುರುದಾರರಿಗೆ ನಾನು ಸರಿಯಾಗಿ ಉಪಚರಿಸಿಲ್ಲ ಎಂದರೆ ಸರಿಯಲ್ಲ. ಮುಖ್ಯ

ವಿಚಾರಣೆಯಲ್ಲಿ ಹೇಳಿರುವಂತೆ ಗಂಡನ ಮನೆಯಲ್ಲಿ 15 ದಿನ, ತವರು ಮನೆಯಲ್ಲಿ 15 ದಿನ ಇರಿಸುತ್ತಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎದುರುದಾರರು ನನಗೆ 6 ತಿಂಗಳಲ್ಲಿ ಬೆಂಗಳೂರಿಗೆ ವರ್ಗಾವಣೆ ಆಗುತ್ತದೆ ನಂತರ ಮನೆಗೆ ಕರೆದುಕೊಂಡು ಹೋಗುತ್ತೇನೆ ಅಲ್ಲಿಯವರೆಗೆ ತವರು ಮನೆಯಲ್ಲಿ ಇರು ಎಂದು ಹೇಳಿದ್ದರು ಎಂದು ಸುಳ್ಳು ಹೇಳಿದ್ದೇನೆ ಎಂದರೆ ಸರಿಯಲ್ಲ. ನಾನು ಗಂಡನೊಂದಿಗೆ ಬಾಳಲಾಗದೆ ಸಕಾರಣವನ್ನು ನೀಡದೆ ಸುಳ್ಳು ಕೇಸ್ ಹಾಕಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

(ಭಾಗ್ಯಮ್ಮ)

ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್

ಮತ್ತು ಜೆ.ಎಂ.ಎಫ್.ಸಿ.,ಹುಣಸೂರು.